# ಎಸ್.ಎಸ್.ಎಲ್.ಸಿ. ಹಾಗೂ ನಂತರದ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ವಿತರಣೆ:

(ಸರ್ಕಾರಿ ಆದೇಶ ಸಂ.ಮಮಇ-113, ಪಿ.ಹೆಚ್.ಪಿ-2014 ಬೆಂಗಳೂರು ದಿನಾಂಕ:3-7-2014)

**ಪೀಠಿಕೆ**

ಹೆಚ್ಚು ಜನ ಅಂಧ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಹೊಂದಲು ಅನುಕೂಲವಾಗುವಂತೆ ಟಾಕಿಂಗ್ ಲ್ಯಾಪ್ ಟಾಪ್ ಯೋಜನೆಯನ್ನು 2014-15ನೇ ಸಾಲಿನಿಂದ ಜಾರಿಗೆ ತರಲಾಗಿದ್ದು SSLC ಹಾಗೂ ನಂತರದ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಉಚಿತವಾಗಿ ಟಾಕಿಂಗ್ ಲ್ಯಾಪ್‌ಟಾಪ್ ನೀಡಲಾಗುತ್ತಿದೆ.

**ಉದ್ದೇಶ**

- ಎಸ್.ಎಸ್.ಎಲ್.ಸಿ. ಹಾಗೂ ನಂತರದ ವ್ಯಾಸಂಗ ಮಾಡುತ್ತಿರುವ ಎಲ್ಲಾ ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಒದಗಿಸುವುದು.
- ಅಂಧ ವಿದ್ಯಾರ್ಥಿಗಳನ್ನು ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸಿ ಸಮಾಜದ ಮುಖ್ಯವಾಹಿನಿಗೆ ತರುವುದು.
- ಬೇರೆಯವರ ಅವಲಂಬನೆಯಿಲ್ಲದೇ ತಮ್ಮ ಶಿಕ್ಷಣವನ್ನು ತಾವೇ ಮುಂದುವರೆಸಲು ಸಹಕಾರಿಯಾಗುತ್ತದೆ.
- ಅಂಧ ವಿದ್ಯಾರ್ಥಿಗಳು ಮಧ್ಯಂತರದಲ್ಲೇ ವ್ಯಾಸಂಗವನ್ನು ಮೊಟಕುಗೊಳಿಸದಂತೆ ತಡೆಗಟ್ಟಬಹುದು.

**ಷರತ್ತುಗಳು**

- ಜಿಲ್ಲಾ ಮಟ್ಟದಲ್ಲಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗುವ ಸಮಿತಿ ಮೂಲಕ ಆಯ್ಕೆ ಮಾಡಲಾಗುವುದು.
- ಯೋಜನೆಯ ಸೌಲಭ್ಯ ಪಡೆಯಲು ಯಾವುದೇ ಆದಾಯಮಿತಿ ಇರುವುದಿಲ್ಲ.
- ವ್ಯಾಸಂಗ ಮಾಡುತ್ತಿರುವ ಬಗ್ಗೆ ಸಂಬಂಧಿತ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಣ ಪತ್ರ ಒದಗಿಸಬೇಕು.
- ಸರ್ಕಾರ ನೀಡುವ ಲ್ಯಾಪ್‌ಟಾಪ್‌ನ್ನು ಯಾವುದೇ ಕಾರಣಕ್ಕೂ ಪರಭಾರೆ ಮಾಡಬಾರದು.
- ಜೀವಿತ ಕಾಲದಲ್ಲಿ ಒಂದು ಬಾರಿ ಈ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.
- ಬೇರೆ ಇಲಾಖೆಗಳು ಅಥವಾ ಸಂಘ ಸಂಸ್ಥೆಗಳಿಂದ ಲ್ಯಾಪ್‌ಟಾಪ್ ಪಡೆದಿದ್ದಲ್ಲಿ ಅರ್ಹರಿರುವುದಿಲ್ಲ. ಈ ಬಗ್ಗೆ ಸ್ವಯಂ ಘೋಷಿತ ದೃಢೀಕರಣವನ್ನು ನೀಡಬೇಕು.
- ಒಂದು ವೇಳೆ ಹೆಚ್ಚಿನ ಫಲಾನುಭವಿಗಳಿಗೆ ಬೇಡಿಕೆ ಬಂದಲ್ಲಿ ಮೊದಲು ಶೇ.100ರಷ್ಟು ದೃಷ್ಟಿದೋಷ ಇರುವ ಪದವಿ ಹಾಗೂ ಪದವಿ ನಂತರದ ರೆಗ್ಯುಲರ್ ಕೋರ್ಸ್ ಮಾಡುತ್ತಿರುವವರಿಗೆ ಆದ್ಯತೆ ನೀಡಲಾಗುವುದು. ತದನಂತರ ಶೇ.100ಕ್ಕಿಂತ ಕಡಿಮೆ ಇರುವ ಪ್ರಕರಣಗಳಲ್ಲಿ ಹೆಚ್ಚಿನ ದೃಷ್ಟಿದೋಷ ಇರುವವರಿಗೆ ಮೊದಲ ಆದ್ಯತೆ ನೀಡಿ ನಂತರ ಕಡಿಮೆ ದೃಷಿದೋಷ ಹೊಂದಿರುವವರಿಗೆ ನೀಡಲಾಗುವುದು.